ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE 7/6/2020

# ಐವರು ಅಂತಿಮ

## ಬಿಜೆಪಿಯಿಂದ ರಮೇಶ್ ಕತ್ತಿ, ಕೋರೆ, ಪ್ರಕಾಶ್ ಶೆಟ್ಟಿ ಫೈನಲ್

ಬೆಂಗಳೂರು: ರಾಜ್ಯಸಭೆ ಚುನಾವಣೆಗೆ ಬಿಜೆಪಿಯಿಂದ ಎರಡು ಸ್ಥಾನಗಳಿಗೆ ಐವರ ಹೆಸರನ್ನು ಅಂತಿಮಗೊಳಿಸಿ ರಾಜ್ಯ ಬಿಜೆಪಿ ಕೋರ್ ಕಮಿಟಿ ಪಕ್ಷದ ಕೇಂದ್ರ ಚುನಾವಣಾ ಸಮಿತಿಗೆ ಕಳುಹಿಸಿಕೊಟ್ಟಿದೆ.

ಮಾಜಿ ಸಚಿವ ಉಮೇಶ್ ಕತ್ತಿ ಸಹೋದರ ರಮೇಶ್ ಕತ್ತಿ, ಹಾಲಿ ರಾಜ್ಯಸಭಾ ಸದಸ್ಯ ಪ್ರಭಾಕರ್ ಕೋರೆ, ಉದ್ಯಮಿ ಪ್ರಕಾಶ್ ಶೆಟ್ಟಿ ಮಾಜಿ ಶಾಸಕ ನಿರ್ಮಲ್‌ಕುಮಾರ್ ಸುರಾನ ಹಾಗೂ ಡಾ.ಎಂ.ನಾಗರಾಜ ಅವರ ಹೆಸರನ್ನು ಅಂತಿಮಗೊಳಿಸಲಾಗಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಕೇಂದ್ರ ಚುನಾವಣಾ ಸಮಿತಿ ಭಾನುವಾರ ಸಂಜೆ ಇವರಲ್ಲಿ ಇಬ್ಬರ ಹೆಸರನ್ನು ಘೋಷಿಸುವ ಸಾಧ್ಯತೆಯಿದೆ.

ರಾಜ್ಯ ಬಿಜೆಪಿ ಕಚೇರಿಯಲ್ಲಿ ಕೋರ್ ಕಮಿಟಿ ಸಭೆ
ಕೇಂದ್ರ ಚುನಾವಣಾ ಸಮಿತಿಗೆ ಹೆಸರು ರವಾನೆ

ಶನಿವಾರ ರಾಜ್ಯ ಬಿಜೆಪಿ ಕಚೇರಿಯಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಅವರ ನೇತೃತ್ವದಲ್ಲಿ ನಡೆದ ಕೋರ್ ಕಮಿಟಿ ಸಭೆಯಲ್ಲಿ ಬೆಳಗಾವಿ ಮೂಲದ ರಮೇಶ್ ಕತ್ತಿ, ಪ್ರಭಾಕರ್ ಕೋರೆ ಹಾಗೂ ಕರಾವಳಿ ಮೂಲದ ಪ್ರಕಾಶ್ ಶೆಟ್ಟಿಯವರ ಹೆಸರುಗಳು ಪ್ರಮುಖವಾಗಿ ಚರ್ಚೆಗೆ ಬಂದವು.

ರಾಜ್ಯಸಭೆ ಚುನಾವಣೆಗೆ ಅಭ್ಯರ್ಥಿ ಆಯ್ಕೆ ಸಂಬಂಧಿಸಿದಂತೆ ಸುದೀರ್ಘವಾದ ಚರ್ಚೆ ನಡೆದಿದ್ದು ಡಾ. ವಿಜಯ್ ಸಂಕೇಶ್ವರ್ ಹೆಸರು ಕೂಡ ಚರ್ಚೆಗೆ ಬಂದಿತ್ತು ಎನ್ನಲಾಗಿದೆ. ಅಂತಿಮವಾಗಿ ಐವರ ಹೆಸರನ್ನು ಕಳುಹಿಸಿಕೊಡಲಾಯಿತು.

**ಮುರುಳೀಧರರಾವ್ ಬಗ್ಗೆ ಚರ್ಚೆ ಇಲ್ಲ:** ಹಿರಿಯ ಬ್ಯಾಂಕರ್ ಕೆ.ವಿ.ಕಾಮತ್ ಹಾಗೂ ಪಕ್ಷದ ರಾಜ್ಯ ಉಸ್ತುವಾರಿ ಮುರಳೀಧರ್ ರಾವ್ ಅವರ ಹೆಸರು ಕೋರ್ ಕಮಿಟಿಯಲ್ಲಿ ಚರ್ಚೆಗೆ ಬಂದಿಲ್ಲ. ಈ ಎರಡು ಹೆಸರುಗಳಲ್ಲಿ ಒಬ್ಬರನ್ನು ಕೇಂದ್ರ ಸಮಿತಿಯೇ ಅಂತಿಮಗೊಳಿಸಿದರೂ, ಅದನ್ನು ಯಾವುದೇ ಅಸಮಾಧಾನವಿಲ್ಲದೆ ಒಪ್ಪಿಕೊಳ್ಳಲಾಗುವುದು. ರಾಜ್ಯದಿಂದ ಹೋಗಿರುವ ಐವರಲ್ಲಿ ಯಾರನ್ನು ಕೇಂದ್ರ ಸಮಿತಿ ಅಂತಿಮಗೊಳಿಸುತ್ತದೆ ಎಂಬುದು ತಿಳಿದಿಲ್ಲ. ಆದರೆ, ಕೇಂದ್ರದಿಂದ ಬೇರೆ ಹೆಸರನ್ನು ಶಿಫಾರಸು ಮಾಡಿದ್ದರೂ, ಒಪ್ಪಿಕೊಳ್ಳಲೇಬೇಕಾಗುತ್ತದೆ ಎಂದು ಬಿಜೆಪಿ ಮೂಲಗಳು ತಿಳಿಸಿವೆ.

ಕಾಂಗ್ರೆಸ್‌ನಿಂದ ಮಲ್ಲಿಕಾರ್ಜುನ ಖರ್ಗೆ ಅವರ ಹೆಸರು ಅಂತಿಮಗೊಳಿಸಿರುವುದು, ಜೆಡಿಎಸ್‌ನಿಂದ ಮಾಜಿ ಪ್ರಧಾನಿ ದೇವೇಗೌಡರು ಸ್ಪರ್ಧೆ ಮಾಡುವ ಕುರಿತ ಪ್ರಸ್ತಾಪಗಳ ಬಗ್ಗೆಯೂ ಸಭೆಯಲ್ಲಿ ಚರ್ಚೆಯಾಯಿತೆಂದು ಹೇಳಲಾಗಿದೆ.

### ಮಾನದಂಡವೇನು?

ಪ್ರಾದೇಶಿಕ ಲೆಕ್ಕಾಚಾರ ಹಾಗೂ ಬಂಡಾಯ ಶಮನಕ್ಕಾಗಿ ರಾಜ್ಯ ಬಿಜೆಪಿ ಯತ್ನ

### ಪ್ರಕಾಶ್ ಶೆಟ್ಟಿ



ಹೋಟೆಲ್ ಉದ್ಯಮಿ ಹಾಗೂ ಎಂಆರ್‌ಜಿ ಸಮೂಹದ ಸಂಸ್ಥಾಪಕ ಮುಖ್ಯಸ್ಥರಾಗಿರುವ ಪ್ರಕಾಶ್ ಶೆಟ್ಟಿಯವರು ಕರಾವಳಿ ಮೂಲದವರಾಗಿದ್ದಾರೆ. ಬಹಳ ವರ್ಷಗಳಿಂದಲೂ ಬಿಜೆಪಿ ಹಾಗೂ ಪರಿವಾರ ಸಂಘಟನೆಗಳ ಹಿತೈಷಿಯಾಗಿ ಗುರುತಿಸಿಕೊಂಡಿದ್ದರು. ರಾಜ್ಯ ಸಂಪುಟ ವಿಸ್ತರಣೆ ವೇಳೆ ಕರಾವಳಿ ಭಾಗಕ್ಕೆ ನಿರೀಕ್ಷಿತ ಸಂಖ್ಯೆಯಲ್ಲಿ ಸಚಿವ ಸ್ಥಾನ ನೀಡಿಲ್ಲ, ಹೀಗಾಗಿ ರಾಜ್ಯಸಭೆಗೆ ಕರಾವಳಿ ಮೂಲದ ಪ್ರಕಾಶ್ ಶೆಟ್ಟಿಯವರನ್ನು ಆಯ್ಕೆ ಮಾಡಲಾಗಿದೆ. ಇದಕ್ಕೆ ಆರ್‌ಎಸ್‌ಎಸ್‌ನಿಂದ ಆಕ್ಷೇಪ ಬಂದಿಲ್ಲ ಎನ್ನಲಾಗಿದೆ.

### ಪ್ರಭಾಕರ ಕೋರೆ



ಪ್ರಭಾಕರ್ ಕೋರೆಯವರು ಕಾಂಗ್ರೆಸ್ ತ್ಯಜಿಸಿ ಬಿಜೆಪಿ ಸೇರಿಕೊಂಡ ನಂತರ ಒಂದು ಅವಧಿಗೆ ರಾಜ್ಯಸಭಾ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ. ಅಲ್ಲದೆ, ಕೇಂದ್ರ ಬಿಜೆಪಿ ನಾಯಕರು ಹಾಗೂ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಹಿರಿಯರೊಂದಿಗೂ ಉತ್ತಮ ಸಂಬಂಧ ಹೊಂದಿದ್ದಾರೆ. ಅಲ್ಲದೆ, ಬೆಳಗಾವಿ ಭಾಗದಲ್ಲಿ ಬಿಜೆಪಿಯಿಂದ ಉತ್ತಮ ಹೆಸರು ಮಾಡಿದ್ದಾರೆ. ಜತೆಗೆ ಶಿಕ್ಷಣ ಸಂಸ್ಥೆಗಳ ಮೂಲಕ ಸಾಮಾಜಿಕ ಕಾರ್ಯವನ್ನು ಮಾಡುತ್ತಿದ್ದಾರೆ. ಈ ಉದ್ದೇಶದಿಂದಲೇ 2ನೇ ಬಾರಿಗೆ ಅವರ ಹೆಸರನ್ನು ಕಳುಹಿಸಲಾಗಿದೆ ಎನ್ನಲಾಗಿದೆ.

### ರಮೇಶ್ ಕತ್ತಿ



ಬಿಜೆಪಿಯ ಹಿರಿಯ ಶಾಸಕರಲ್ಲಿ ಒಬ್ಬರಾದ ಉಮೇಶ್ ಕತ್ತಿಯವರ ಸಹೋದರ ರಮೇಶ್ ಕತ್ತಿ. ಚಿಕ್ಕೋಡಿ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿ, ಸಂಸದರಾಗಿಯೂ ಸೇವೆ ಸಲ್ಲಿಸಿದ್ದರು. ರಾಜ್ಯ ಸಚಿವ ಸಂಪುಟ ವಿಸ್ತರಣೆ ವೇಳೆ ಉಮೇಶ್ ಕತ್ತಿಯವರಿಗೆ ಸಚಿವ ಸ್ಥಾನ ನೀಡಲಾಗುತ್ತದೆ ಎಂಬ ಅಂದಾಜಿದ್ದರೂ, ಸಿಕ್ಕಿರಲಿಲ್ಲ. ಹೀಗಾಗಿ ಸಚಿವ ಸ್ಥಾನದ ಬದಲಿಗೆ ಸಹೋದರನಿಗೆ ರಾಜ್ಯ ಸಭೆ ಸ್ಥಾನ ನೀಡಿ ಎಂಬ ಒತ್ತಾಯವನ್ನು ಮುಂದಿಟ್ಟಿದ್ದರು. ಇದೇ ವಿಚಾರವಾಗಿ ಬಂಡಾಯದ ಬಾವುಟ ಹಾರಿಸುವ ಸೂಚನೆಯನ್ನು ನೀಡಿದ್ದರು.

### ಸಂಘಟನೆ ಕಾರಣಕ್ಕಾಗಿ ಸೇರ್ಪಡೆ

ಮೊದಲಿಗೆ ಮೂರು ಹೆಸರನ್ನಷ್ಟೇ ಫೈನಲ್ ಮಾಡಿದ್ದ ರಾಜ್ಯ ಬಿಜೆಪಿ, ರಾತ್ರಿ ವೇಳೆಗೆ ಮತ್ತೆ ಎರಡು ಹೆಸರುಗಳನ್ನು ಸೇರ್ಪಡೆ ಮಾಡಿದೆ. ನಿರ್ಮಲ್ ಕುಮಾರ್ ಸುರಾನ ಮತ್ತು ಡಾ. ಎಂ.ನಾಗರಾಜ ಅವರನ್ನು ಪಕ್ಷದ ಸಂಘಟನೆ ದೃಷ್ಟಿಯಿಂದ ಸೇರ್ಪಡೆ ಮಾಡಿ ಕಳುಹಿಸಲಾಗಿದೆ ಎಂದು ಪಕ್ಷದ ಮೂಲಗಳು ಹೇಳಿವೆ. ಈ ಕುರಿತು ಪಕ್ಷದ ವರಿಷ್ಠರು ನಿರ್ಧರಿಸಲಿದ್ದಾರೆ.

